**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/536/ಗ್ರಾಪಂಕಾ/2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:27-11-2014

**ಇವರಿಂದ:**

ಸರ್ಕಾರದ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,

**ಇವರಿಗೆ:**

ಎಲ್ಲಾ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು,
ಜಿಲ್ಲಾ ಪಂಚಾಯತ್‌ಗಳು

ಮಾನ್ಯರೆ,

**ವಿಷಯ:** ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಭಾರತ ಸಂವಿಧಾನದ ಅನುಚ್ಛೇದ 371 (ಜೆ) ಮೇರೆಗೆ ಹೈದರಾಬಾದ ಕರ್ನಾಟಕದ ಪ್ರದೇಶದ ಅಭ್ಯರ್ಥಿಗಳಿಗೆ ನೇಮಕಾತಿ/ಮುಂಬಡ್ತಿಯಲ್ಲಿ ಮೀಸಲಾತಿಯನ್ನು ನಿಗಧಿಪಡಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಪತ್ರ ಸಂಖ್ಯೆ ಗ್ರಾಅಪ/59/ಇತರೆ/2014, ದಿನಾಂಕ: 17.02.2014.
2. ಸರ್ಕಾರದ ಅಧಿಸೂಚನೆ ಸಂಖ್ಯೆ ಗ್ರಾಅಪ 374 ಗ್ರಾಪಂಕಾ 2014 ದಿನಾಂಕ: 21.02.2014.
3. ಸರ್ಕಾರದ ಅಧಿಸೂಚನೆ ಸಂಖ್ಯೆ ಗ್ರಾಅಪ 536 ಗ್ರಾಪಂಕಾ 2014 ದಿನಾಂಕ: 24.11.2014.
4. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 33 ಹೈಕಉ 2014 ದಿ: 10-04-2014.

ಉಲ್ಲೇಖ (1) ರಲ್ಲಿನ ಅಧಿಸೂಚನೆಯಲ್ಲಿ ಹೈದರಾಬಾದ್-ಕರ್ನಾಟಕ ಪ್ರದೇಶಗಳಿಗೆ ಸಂವಿಧಾನದ ಅನುಚ್ಛೇದ 371 (ಜೆ) ರಡಿ ಸ್ಥಳೀಯ ಸೇವೆಗಾಗಿ ಹುದ್ದೆಗಳನ್ನು ಗುರುತಿಸಲಾಗಿದೆ. ಉಲ್ಲೇಖ (2) ರಲ್ಲಿನ ಸರ್ಕಾರದ ಅಧಿಸೂಚನೆಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ರಾಜ್ಯಮಟ್ಟದ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದೆ. ಉಲ್ಲೇಖ (3) ರ ಸರ್ಕಾರದ ಅಧಿಸೂಚನೆಯಲ್ಲಿ ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದಕ್ಕೆ ಸೇರಲು ಇಚ್ಛಿಸಿರುವ ಕೆಲವು ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದೆ. ಈ ಜೇಷ್ಠತಾ ಪಟ್ಟಿಯನ್ನು ಸಂಬಂಧಿಸಿದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಮಾಹಿತಿಗಾಗಿ ತಮ್ಮ ಜಿಲ್ಲಾ ಪಂಚಾಯತಿ ಕಛೇರಿ ಹಾಗೂ ತಾಲ್ಲೂಕು ಪಂಚಾಯತಿಗಳಲ್ಲಿ ಪ್ರಕಟಿಸುವಂತೆ ಹಾಗೂ ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಸ್ವೀಕರಿಸಿ ಅವುಗಳನ್ನು ಸಂಬಂಧಿಸಿದ ಸೇವಾ ಪುಸ್ತಕದೊಡನೆ ಪರಿಶೀಲಿಸಿ ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ.

ಹೈದರಾಬಾದ್ ಕರ್ನಾಟಕ ಪ್ರದೇಶದ ಜಿಲ್ಲೆಗಳನ್ನು ಒಳಗೊಂಡಂತೆ ಇತರೆ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ಸೇರಿದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಅವರು ಉಲ್ಲೇಖಿತ ಅಧಿಸೂಚನೆಯ ಸೌಲಭ್ಯಗಳನ್ನು ಪಡೆಯಲಿಚ್ಛಿಸಿದ್ದರೆ, ಅಂತಹ ನೌಕರರುಗಳ, 1) ಜನನ ಪ್ರಮಾಣ ಪತ್ರ, 2) ವಾಸ ಸ್ಥಳ ಪ್ರಮಾಣ ಪತ್ರ 3) ವ್ಯಾಸಂಗ ಪ್ರಮಾಣ ಪತ್ರ ಮತ್ತು ಸ್ವ-ಗ್ರಾಮ ಪ್ರಮಾಣ ಪತ್ರ, ಸ್ಥಳೀಯ ವೃಂದಕ್ಕೆ ಸೇರುವಿಕೆಯ ಅರ್ಜಿ, ಇತ್ಯಾದಿ ವಿವರಗಳನ್ನು, ಸಂಬಂಧಿಸಿದ ನೌಕರರುಗಳ ಸೇವಾ ಪುಸ್ತಕಗಳನ್ನು ಪರಿಶೀಲಿಸಿ, ದೃಢೀಕರಿಸಿ ನಿಗಧಿತ ನಮೂನೆಯಲ್ಲಿ ಸರ್ಕಾರಕ್ಕೆ ಕಳುಹಿಸಿಕೊಡುವಂತೆ ಸೂಚಿಸಲಾಗಿದೆ. ವಿವರಗಳನ್ನು ಈ ಕೆಳಕಂಡ ನಮೂನೆಯಲ್ಲಿ ಎಮ್.ಎಸ್-ಎಕ್ಸೆಲ್ ನಲ್ಲಿ (ನುಡಿ-01 ಇ) ಹಾರ್ಡ್ ಮತ್ತು ಸಾಫ್ಟ್ ಪ್ರತಿಯೊಂದಿಗೆ ಇ-ಮೇಲ್ (sogp2011@gmail.com) ಸರ್ಕಾರಕ್ಕೆ **ಅತಿ ಜರೂರಾಗಿ** ಕಳುಹಿಸಿಕೊಡುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

**ಮುಂದುವರೆದು ಉಲ್ಲೇಖ (4) ರ ಸರ್ಕಾರದ ಅಧಿಕೃತ ಜ್ಞಾಪನದಲ್ಲಿ ಭಾರತ ಸಂವಿಧಾನದ 371(ಜೆ) ಅನುಚ್ಛೇದವನ್ನು ಅನುಷ್ಠಾನಗೊಳಿಸುವಾಗ ಸ್ಥಳೀಯ ವೃಂದವನ್ನು ರಚಿಸಿ, ಸ್ಥಳೀಯ ವ್ಯಕ್ತಿಗಳನ್ನು ಸ್ಥಳೀಯ ವೃಂದಕ್ಕೆ ಹಂಚಿಕೆ ಮಾಡಿ ಆ ವೃಂದಕ್ಕೆ ವರ್ಗಾವಣೆ ಮಾಡಿದ ನಂತರ ರೋಷ್ಟರ್ ಬಿಂದುಗಳನ್ನು ಸರಿದೂಗಿಸಿ, ರೋಷ್ಟರ್‌ನ್ನು ಚಾಲನೆಗೊಳಿಸುವ ಕುರಿತು ಸವಿವರವಾಗಿ ತಿಳಿಸಲಾಗಿದೆ. ಹೈದರಾಬಾದ್ ಕರ್ನಾಟಕ ಪ್ರದೇಶದ ವ್ಯಾಪ್ತಿಗೆ ಬರುವ 6 ಜಿಲ್ಲೆಗಳು ಸೇರಿದಂತೆ ಇನ್ನುಳಿದ 24 ಜಿಲ್ಲಾ ಪಂಚಾಯತಿಗಳ ವ್ಯಾಪ್ತಿಯ ಗ್ರಾಮ ಪಂಚಾಯತಿಗಳಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ ಹೈದರಾಬಾದ್ ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳು ಕರ್ತವ್ಯ ನಿರ್ವಹಿಸುತ್ತಿದ್ದರೆ ಸ್ಥಳೀಯ ವ್ಯಕ್ತಿಗಳನ್ನು ಅವರ ಜೇಷ್ಠತೆ ಹಾಗೂ ರೋಷ್ಟರ್ ಬಿಂದುಗಳ ಸಮೇತ ಅವರ ವರ್ಗಾವಣೆ ಹೊಂದುವ ಸ್ಥಳೀಯ ವೃಂದಕ್ಕೆ ವರ್ಗಾಯಿಸಲು 24 ಜಿಲ್ಲೆಗಳ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮ ವಹಿಸತಕ್ಕದ್ದು. ಒಂದು ವೇಳೆ ಸ್ಥಳೀಯ ವೃಂದಕ್ಕೆ ಹಂಚಿಕೆ ಮಾಡಲು ಸ್ಥಳೀಯ ವ್ಯಕ್ತಿಗಳು ಒಪ್ಪದಿದಲ್ಲಿ ಮಾಹಿತಿಯನ್ನು ಶೂನ್ಯವೆಂದು ಪರಿಗಣಿಸಲು 6 ಜಿಲ್ಲೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪತ್ರ ಮುಖೇನ ತಿಳಿಸತಕ್ಕದ್ದು.**

## ನಮೂನೆ

**ವೃಂದದ ಹೆಸರು:-** ಪಂಚಾಯತಿ ಅಭಿವೃದ್ಧಿ ಅಧಿಕಾರಿ                                        ಜಿಲ್ಲೆಯ ಹೆಸರು:

| ಕ್ರ.ಸಂ | ಹೆಸರು | ಜಿಲ್ಲಾ ಜೇಷ್ಠತಾ ಪಟ್ಟಿಯಲ್ಲಿನ ಜೇಷ್ಠತಾ ಕ್ರಸಂ | ರಾಜ್ಯ ಮಟ್ಟದ ಅಂತರ್ ಜಿಲ್ಲಾ ಜೇಷ್ಠತಾ ಕ್ರ.ಸಂ (ಲಭ್ಯವಿದ್ದಲ್ಲಿ) | ಜನ್ಮ ದಿನಾಂಕ | ಪ್ರಥಮವಾಗಿ ಸರ್ಕಾರಿ ಸೇವೆಗೆ ಸೇರಿದ ದಿನಾಂಕ | ನೇಮಕಾತಿ/ ಬಡ್ತಿ ಹೊಂದಿದ ದಿನಾಂಕ | ನೇಮಕಾತಿ ವಿಧಾನ | ಪ್ರವರ್ಗ | ಹೆಚ್ಚುವರಿ ಮಾಹಿತಿ, (ಇದ್ದರೆ) |
|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 |
| ಉದಾ: | | | | 10/05/1984 | 05/04/2010 | 05/04/2010 | | | |

ತಮ್ಮ ವಿಶ್ವಾಸಿ,

28/11/14

**(ಕೆ.ಯಾಲಕ್ಕಿಗೌಡ)**
ನಿರ್ದೇಶಕರು (ಪಂ.ರಾಜ್) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿ:**

ಕಾರ್ಯನಿರ್ವಾಹಕಾಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿ, ರವರ ಮಾಹಿತಿಗಾಗಿ ಹಾಗೂ ಮೇಲ್ಕಂಡ ವಿವರಗಳನ್ನು ಜಿಲ್ಲಾ ಪಂಚಾಯತಿ ಮುಖಾಂತರ ತುರ್ತಾಗಿ ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ.